**ಓ.ಎಸ್.ನಂ.27/2019**
**ಡಿ ಡಬ್ಲ್ಯೂ: 1**

**ದಿನಾಂಕ : 30.03.2021. ರಂದು ಸಾಕ್ಷಿದಾರರನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಂದುವರೆದ ಮುಖ್ಯ ವಿಚಾರಣೆ: ಶ್ರೀ.ಬಿ.ಕೆ.ಪಿ. ವಕೀಲರಿಂದ:**

ನಾನು ನನ್ನ ಮುಖ್ಯ ವಿಚಾರಣೆಯ ಬದಲಾಗಿ ಪ್ರಮಾಣಪತ್ರವನ್ನು ಸಲ್ಲಿಸಿರುತ್ತೇನೆ. ಪ್ರಮಾಣಪತ್ರದಲ್ಲಿರುವ ಅಂಶವನ್ನು ನಾನೇ ಹೇಳಿ ಬರೆಸಿ ಸಹಿ ಹಾಕಿರುತ್ತೇನೆ. ಅದರಲ್ಲಿನ ಅಂಶಗಳು ಸತ್ಯವಾಗಿರುತ್ತವೆ. ನ್ಯಾಯಾಲಯದ ಮುಂದೆ ಸಲ್ಲಿಸಿರುವ ದಾಖಲೆಗಳನ್ನು ನೋಡಿದರೆ ಗುರುತಿಸುತ್ತೇನೆ.

ನನ್ನ ತಂದೆ ನನಗೆ ಬರೆದುಕೊಟ್ಟಿರುವ ಸಾಮಾನ್ಯ ಅಧಿಕಾರ ಪತ್ರವನ್ನು ಹಾಜರುಪಡಿಸಿರುತ್ತೇನೆ. ಅದನ್ನು ನಿಡಿ: 1 ಎಂದು ಗುರುತಿಸಲಾಯಿತು. ಆಕಾರ್ ಬಂದ್ ಉತ್ತಾರ್ ಹಾಜರುಪಡಿಸಿರುತ್ತೇನೆ. ಅದನ್ನು ನಿಡಿ: 2 ಎಂದು ಗುರುತಿಸಲಾಯಿತು. ಟಿಪ್ಪಣಿ ಉತ್ತಾರ್ ಹಾಜರುಪಡಿಸಿರುತ್ತೇನೆ. ಅದನ್ನು ನಿಡಿ: 3 ಎಂದು ಗುರುತಿಸಲಾಯಿತು. 3 ಪಹಣಿ ಪತ್ರಿಕೆಗಳನ್ನು ಹಾಜರುಪಡಿಸಿರುತ್ತೇನೆ. ಅವುಗಳನ್ನು ನಿಡಿ: 4 ರಿಂದ 6 ಎಂದು ಗುರುತಿಸಲಾಯಿತು. ದರ್ಖಾಸ್ತು ಅರ್ಜಿಯ ಧೃಡೀಕೃತ ನಕಲನ್ನು ಹಾಜರುಪಡಿಸಿರುತ್ತೇನೆ. ಅದನ್ನು ನಿಡಿ: 7 ಎಂದು ಗುರುತಿಸಲಾಯಿತು.

**ಪಾಟೀ ಸವಾಲು: ವಾದಿ ಗೈರ ಹಾಜರಿದ್ದು, ಪಾಟೀ ಸವಾಲಿಗೆ ಸಮಯವಕಾಶ ನೀಡಲಾಗಿದೆ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು.)

ಓ ಹೇ ಕೇ ಸರಿ ಇದೆ.

ಪ್ರಧಾನ ಸಿವಿಲ್ ಮತ್ತು ಜೆ ಎಂ ಎಫ್ ಸಿ.
ಹೊಸದುರ್ಗ .